## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 1102 |
| 2 | ಸದಸ್ಯರ ಹೆಸರು | : | ಡಾ: ಆರತಿ ಕೃಷ್ಣ (ನಾಮನಿರ್ದೇಶಿತರು) |
| 3 | ಉತ್ತರಿಸುವ ದಿನಾಂಕ | : | 12-03-2026 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಜಿ.ಬಿ.ಎ ವ್ಯಾಪ್ತಿಯಲ್ಲಿನ ಸಾರ್ವಜನಿಕ ಶೌಚಾಲಯಗಳ ಅವ್ಯವಸ್ಥೆಯನ್ನು ಸರಿಪಡಿಸುವ ಸಂಬಂಧ ಯಾವುದಾದರು ಸ್ವಯಂಸೇವಾ ಸಂಸ್ಥೆಯವರು ವರದಿಯನ್ನು ಸಲ್ಲಿಸಿದ್ದಾರೆಯೇ; ಸಲ್ಲಿಸಿದ್ದಲ್ಲಿ, ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಗ್ರೇಟರ್ ಬೆಂಗಳೂರು ಪ್ರದೇಶದ ಐದು ನಗರ ಪಾಲಿಕೆ ವ್ಯಾಪ್ತಿಯಲ್ಲಿ ಯಾವುದೇ ಸ್ವಯಂ ಸೇವಾ ಸಂಸ್ಥೆಯವರು ಸಾರ್ವಜನಿಕ ಶೌಚಾಲಯಗಳ ಅವ್ಯವಸ್ಥೆಯನ್ನು ಸರಿಪಡಿಸುವ ಸಂಬಂಧ ವರದಿಯನ್ನು ಸಲ್ಲಿಸಿರುವುದಿಲ್ಲ. |
| ಆ) | ಸದರಿ ಸಾರ್ವಜನಿಕ ಶೌಚಾಲಯಗಳಲ್ಲಿ ನಿಗದಿಪಡಿಸಿರುವ ಶುಲ್ಕಕ್ಕಿಂತ ಹೆಚ್ಚಿನ ಶುಲ್ಕ ಪಡೆಯುತ್ತಿರುವುದು ಜಿ.ಬಿ.ಎ ಗಮನದಲ್ಲಿದೆಯೇ; ಇದ್ದಲ್ಲಿ, ಅಂತಹ ಪ್ರಕರಣಗಳ ಕುರಿತು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ; | ಈ ಬಗ್ಗೆ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ. |
| ಇ) | ಸದರಿ ಸಾರ್ವಜನಿಕ ಶೌಚಾಲಯಗಳಲ್ಲಿ ಪ್ರತ್ಯೇಕವಾದ ವ್ಯವಸ್ಥೆಯನ್ನು ಮಹಿಳೆಯರಿಗೆ ಹಿನ್ನೆಲೆಯಲ್ಲಿ, ಅವರ ಸುರಕ್ಷತೆಗೆ ಪೂರಕವಾಗಿ ಎಲ್ಲಾ ಸಾರ್ವಜನಿಕ ಶೌಚಾಲಯಗಳಲ್ಲಿ ಸಿ.ಸಿ. ಕ್ಯಾಮರಗಳನ್ನು ಅಳವಡಿಸಲಾಗಿದೆಯೇ; ಇಲ್ಲದಿದ್ದರೆ, ಇಲ್ಲಿಯವರೆವಿಗೂ ವಿಳಂಬವಾಗಿರುವುದಕ್ಕೆ ಕಾರಣಗಳೇನು? | ಗ್ರೇಟರ್ ಬೆಂಗಳೂರು ಪ್ರದೇಶದ 5 ನಗರ ಪಾಲಿಕೆಗಳ ಸಾರ್ವಜನಿಕ ಶೌಚಾಲಯಗಳಲ್ಲಿ ಪ್ರಸ್ತುತ ಸಿ.ಸಿ. ಕ್ಯಾಮರಗಳನ್ನು ಅಳವಡಿಸಿರುವುದಿಲ್ಲ ಹಾಗೂ ಈ ಸಂಬಂಧ ಯಾವುದೇ ಪ್ರಸ್ತಾವನೆ ಇರುವುದಿಲ್ಲ.<br><br>ಈಗಾಗಲೇ ಮಹಿಳೆಯರ ಸುರಕ್ಷತೆಗಾಗಿ ಜಿಬಿಎ ವ್ಯಾಪ್ತಿಯಲ್ಲಿ ಪ್ರತ್ಯೇಕವಾಗಿ 100 ಸಂಖ್ಯೆಗಳ SHE toilet ಗಳನ್ನು ನಿರ್ಮಿಸಲು ಕ್ರಮವಹಿಸಲಾಗಿರುತ್ತದೆ. SHE toilet ಗಳಲ್ಲಿ ಕಲ್ಪಿಸಲಾಗಿರುವ ಮೂಲಭೂತ ವಿವರಗಳು ಈ ಕೆಳಕಂಡಂತೆ ಇರುತ್ತದೆ.<br>• ಹಾಲುಣಿಸುವ ಕೊಠಡಿ ಮತ್ತು ಬಟ್ಟೆ ಬದಲಿಸುವ ಕೊಠಡಿ<br>• ನೈರ್ಮಲ್ಯ ಕೊಠಡಿ (ವೆಂಡಿಂಗ್ ಮೆಷಿನ್)<br>• ಆಟೋಮೆಟಿಕ್ ಸೆನ್ಸರ್ ಮೆಷಿನ್<br>• ಹ್ಯಾಂಡ್‌ವಾಷ್ ಮತ್ತು ಕನ್ನಡಿ<br>• ಗ್ರಾನೈಟ್ ಕ್ಲಾಡಿಂಗ್ ಹೊಂದಿದ ವಿಟ್ರಿಫೈಡ್ ನೆಲ<br>• ಶೌಚಾಲಯದ ಹೊರಗೆ ಮತ್ತು ಒಳಗೆ ಎಲ್.ಇ.ಡಿ ದೀಪಗಳು<br>• ಫೀಡ್‌ಬ್ಯಾಕ್ ವ್ಯವಸ್ಥೆ |

**ನಅಇ 209 ಎಂಎನ್‌ವೈ 2026 (ಇ)**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ